ಪ್ರಸ್ತಾವದ ಅಂಗೀಕಾರ

ಶ್ರೀ ಜೈವಂತ್ ಸುಬ್ರಾಯ (ಅಬ್ಕಾರಿ ಸಚಿವರು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಕರ್ನಾಟಕ ಅಬ್ಕಾರಿ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಾಡಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಅಬ್ಕಾರಿ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಉ) (ಈ) ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 1998

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಶ್ರೀ ಬಿ. ಸೋಮಶೇಖರ್ : ಮಾನ್ಯ ಅಧ್ಯಕ್ಷರೆ, ಈ ವಿಚಾರ ಹೋದ ಅಧಿವೇಶನದಲ್ಲಿ ಬಹಳ ವಿವರವಾಗಿ ವಿಧಾನಪರಿಷತ್ತಿನಲ್ಲಿ ಚರ್ಚೆ ಆಗಿದೆ. ಹಾಗೂ ಅನೇಕ ಸಲಹೆ ಸೂಚನೆಗಳನ್ನು ಅದರಲ್ಲಿ ತಂದು ನಾವು ಒಪ್ಪಿಗೆ ಮಾಡಿಕೊಟ್ಟಿದ್ದೇವೆ. ಏನು ಪ್ರತಿ ವರ್ಷ ಪೋಡಿ ಪ್ರಕರಣಗಳು ನಮ್ಮ ರಾಜ್ಯದಲ್ಲಿ ಹೆಚ್ಚುತ್ತಿವೆ, ರೈತನಿಗೆ ಬಹಳ ಅನಾನುಕೂಲ ಆಗುತ್ತಿದೆ. ಆದ್ದರಿಂದ ಅದನ್ನು ಕಡಿಮೆ ಮಾಡುವ ದೃಷ್ಟಿಯಿಂದ ಕೆಲವು ಸುಧಾರಣೆಗಳನ್ನು ತಂದಿರತಕ್ಕದ್ದು. ಇದು ಬಹಳ ಉತ್ತಮವಾದ ಸಲಹೆ ಎಂದು ನನ್ನ ಅಭಿಪ್ರಾಯ.

ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ,

ಅಧ್ಯಕ್ಷರು : 'ಖಂಡ 2 ರಿಂದ 4ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 4ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ಮೊದಲನೆಯ ಖಂಡ, ಹೆಸರು, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಹೆಸರು, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ. ಸೋಮಶೇಖರ್ (ಮಾನ್ಯ ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ನೇ ಸಾಲಿನ ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಊ) ಕರ್ನಾಟಕ ಸಹಕಾರ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕ, 1997

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಸೋಮಶೇಕರ್ (ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "1997ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಇದೊಂದು ಚಿಕ್ಕ ತಿದ್ದುಪಡಿ. ಈಗೇನು ಸಹಕಾರ ಸಂಘಗಳ ನೋಂದಣಿ ಕಾಯ್ದೆ 60ಕ್ಕೆ ಕೆಲವು ವಿಚಾರಗಳನ್ನು ಹೇಳಿದ್ದೇವೆ. ದತ್ತಿ ಸಂಸ್ಥೆಗಳನ್ನು ಅಭಿವೃದ್ಧಿ ಪಡಿಸತಕ್ಕದ್ದು. ಶಿಕ್ಷಣ, ವಿಜ್ಞಾನ, ಸಾಹಿತ್ಯ ಮತ್ತು ಕಲೆಯನ್ನು ಅಭಿವೃದ್ಧಿ ಪಡಿಸುವುದಕ್ಕೆ ಅವಕಾಶ ಇದೆ. ಈಗೇನು ಆಗಿದೆ ಎಂದರೆ ತಿದ್ದುಪಡಿಯಲ್ಲಿ ಹೊಸ ನೈಸರ್ಗಿಕ ಸಂಪನ್ಮೂಲಗಳನ್ನು ಸಂಗ್ರಹಿಸತಕ್ಕ ಅವಕಾಶ ಇರಲಿಲ್ಲ. ಅದಕ್ಕೋಸ್ಕರ ಇದನ್ನೂ ಸೇರಿಸಿಕೊಳ್ಳತಕ್ಕ ಒಂದು ಅವಕಾಶವನ್ನು ವಿಸ್ತರಿಸುತ್ತಿದ್ದೇವೆ, ಇದೊಂದು ಸಣ್ಣ ತಿದ್ದುಪಡಿ ಅಷ್ಟೇ.